ಇ) ಈ ಯೋಜನೆಯ ಉಪಯೋಗ ಹೊಂದಲು ಸಾಕಷ್ಟು ಅಲ್ಪಸಂಖ್ಯಾತರ ಪಂಗಡದವರುಗಳು ಮುಂದೆ ಬರದಿರುವುದು ನಿಜವೇ, ಹಾಗಿದ್ದಲ್ಲಿ ಇದಕ್ಕೆ ಕಾರಣಕೊಡಿ?

ಶ್ರೀ ಬಿ. ಶಿವಣ್ಣ (ಸಮಾಜ ಕಲ್ಯಾಣ ಸಚಿವರು):

ಅ) ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಆಂಗ್ಲೋ ಇಂಡಿಯನ್ ಪಂಗಡದವರು ಈ ಕೆಳಕಂಡ ಯೋಜನೆಗಳಲ್ಲಿ ಸೌಲಭ್ಯಗಳನ್ನು ಪಡೆಯಬಹುದು.

1. ಸ್ವಾವಲಂಬನ ಯೋಜನೆ
2. ವಾಹನ ಚಾಲನಾ ತರಬೇತಿ ಯೋಜನೆ
3. ಫೋರ್‌ಮನ್‌ಶಿಪ್ ತರಬೇತಿ ಯೋಜನೆ
4. ಕಂಪ್ಯೂಟರ್ ಟ್ರೈನಿಂಗ್ ಯೋಜನೆ.

ಆ) ಆಂಗ್ಲೋ ಇಂಡಿಯನ್‌ರನ್ನು ಒಳಗೊಂಡಂತೆ ಸೌಲಭ್ಯಗಳನ್ನು ಪಡೆದುಕೊಂಡಿರುವ ಕ್ರಿಶ್ಚಿಯನ್ ಜನಾಂಗದವರ ವಿವರಗಳು ಕೆಳಕಂಡಂತಿವೆ:

ಸ್ವಾವಲಂಬನ ಯೋಜನೆ	-	360
ವಾಹನ ಚಾಲನಾ ತರಬೇತಿ ಯೋಜನೆ	-	339
ಫೋರ್‌ಮನ್‌ಶಿಪ್ ತರಬೇತಿ	-	007
ಕಂಪ್ಯೂಟರ್ ಟ್ರೈನಿಂಗ್	-	003

ಇ) ನಿಜವಲ್ಲ - ನಿಗಮದ ಎಲ್ಲಾ ಯೋಜನೆಗಳಿಗೂ ಹೆಚ್ಚಿನ ಬೇಡಿಕೆ ಇದ್ದು ಅಲ್ಪಸಂಖ್ಯಾತರ ಪಂಗಡದವರು ಎಲ್ಲಾ ಯೋಜನೆಗಳನ್ನು ಅತ್ಯುತ್ತಮವಾಗಿ ಉಪಯೋಗಿಸಿಕೊಂಡಿರುತ್ತಾರೆ.

ಕಾರ್ಮಿಕರಿಗೆ ಕನಿಷ್ಟ ವೇತನವನ್ನು ಪರಿಷ್ಕರಿಸುವುದು

3729 - ಶ್ರೀ ಸುಭಾಷ್ ಜೋಷಿ (ನಿಪ್ಪಾಣಿ) : ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅನೇಕ ವರ್ಷಗಳಿಂದ ಟೋಬಾಕೋ ಮತ್ತು ಬೀಡಿ ಉದ್ದಿಮೆಯ ಕಾರ್ಮಿಕರಿಗೆ ಕನಿಷ್ಟ ವೇತನವನ್ನು ಪರಿಷ್ಕರಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಯಾವಾಗ ಪರಿಷ್ಕರಿಸಲಾಗುವುದು?

ಇ) ಕನಿಷ್ಠ ವೇತನದ ಬಗ್ಗೆ ಕಾರ್ಮಿಕ ಆಯುಕ್ತರು ಮುಂದೆ ಒಂದು ಒಪ್ಪಂದವಾಗಿದ್ದರೂ ಅದನ್ನು ಅನುಷ್ಠಾನಗೊಳಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಶ್ರೀ ಎ.ಎಸ್. ನಾಡಗೌಡ (ಕಾರ್ಮಿಕ ರಾಜ್ಯ ಸಚಿವರು):

ಅ) ಹೌದು

ಆ) ಈ ವಿಷಯವು ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ.

ಇ) ಉತ್ತರ ಕನ್ನಡ ಮತ್ತು ಧಾರವಾಡ ಜಿಲ್ಲೆಯಲ್ಲಿನ ಬೀಡಿ ಕಾರ್ಮಿಕರಿಂದ ದೂರುಗಳನ್ನು ಸ್ವೀಕರಿಸಲಾಗಿದೆ. ಒಪ್ಪಂದಗಳನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗಿದೆ.